155ನೇಕೇ ನಿ=330=(39) LKR 3008

ಮಾನ್ಯ ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೇಶವ್ ಪ್ರಸಾದ್ ಎಸ್, ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ ಮತ್ತು ಇತರರು ನಿಯಮ 330ರಡಿ ಪ್ರಸ್ತಾಪಿಸಿರುವ ಸೂಚನೆಗೆ ಸರ್ಕಾರದ ಉತ್ತರ/ಹೇಳಿಕೆ

## ಸೂಚನೆ

ನಾಗರೀಕ ಸೇವೆಗಳು ಪ್ರಮುಖ ಪಾತ್ರವನ್ನು ವಹಿಸುವ ನಿಟ್ಟಿನಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಸಾಂವಿಧಾನಿಕ ಕರ್ತವ್ಯವು ಬಹಳ ನಿರ್ಣಾಯಕವಾಗಿದ್ದು, ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ಗೆಜೆಟೆಡ್ ಪ್ರೊಬೇಷನರಿ ಹಾಗೂ ಗ್ರೂಪ್-ಸಿ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕಾಲಕಾಲಕ್ಕೆ ನಿರ್ವಹಿಸುತ್ತಿದೆ. ಇತ್ತೀಚೆಗೆ ಕರ್ನಾಟಕ ಲೋಕಸೇವಾ ಆಯೋಗವು ತನ್ನ ಸಾಂವಿಧಾನಿಕ ಕರ್ತವ್ಯ ಬದ್ಧತೆ, ಪ್ರಾಮಾಣಿಕತೆ ಮತ್ತು ನಿಷ್ಪಕ್ಷಪಾತವಾದ ನೇಮಕಾತಿ ಪ್ರಕ್ರಿಯೆಗಳನ್ನು ಮಾಡುವಲ್ಲಿ ಸಂಪೂರ್ಣವಾಗಿ ವಿಫಲವಾಗಿರುತ್ತದೆ. ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅತೀ ಮುಖ್ಯ ಘಟ್ಟವಾದ ಪ್ರಶ್ನೆ ಪತ್ರಿಕೆಗಳನ್ನು ರಚಿಸುವುದು, ಪರೀಕ್ಷೆಗಳನ್ನು ನಡೆಸುವುದು ಹಾಗೂ ಆಯ್ಕೆ ಪ್ರಕ್ರಿಯೆಗಳನ್ನು ಮಾಡುವುದು. ಗುಣಮಟ್ಟದಲ್ಲಿ, ಭಾಷಾಂತರಗಳಲ್ಲಿ ಪ್ರಶ್ನೆ ಪತ್ರಿಕೆಗಳನ್ನು ತಯಾರು ಮಾಡುವುದರಲ್ಲಿ ಉತ್ತರ ಪತ್ರಿಕೆಯ ಮಾಹಿತಿಯ ಗೌಪ್ಯತೆಯನ್ನು ಕಾಪಾಡುವಲ್ಲಿ, ಯುವ ಪ್ರತಿಭೆಗಳನ್ನು ಗುರುತಿಸುವಲ್ಲಿ ಹಾಗೂ ಇನ್ನಿತರೆ ನೇಮಕಾತಿ ಸಂಬಂಧಿತ ವಿಷಯಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗವು ಸಂಪೂರ್ಣವಾಗಿ ಮುಗ್ಗರಿಸಿ, ಸಾರ್ವಜನಿಕ ವಲಯಗಳಲ್ಲಿ ತನ್ನ ಹೆಸರನ್ನು ಅಸ್ಥಿರಗೊಳಿಸಿ ರಾಜ್ಯದ ಯುವ ಜನರ ಪಾಲಿಗೆ ದು:ಸ್ವಪ್ನವಾಗಿ ಕಾಡುವಲ್ಲಿ ಕುಖ್ಯಾತಿಯನ್ನು ಗಳಿಸಿದೆ. ಇಂತಹ ಗಂಭೀರ ಸಮಸ್ಯೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರವು ಕಾರ್ಯೋನ್ಮುಖವಾಗಬೇಕಿರುವ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

## ಹೇಳಿಕೆ

ಕರ್ನಾಟಕ ಲೋಕಸೇವಾ ಆಯೋಗವು ಒಂದು ಸಾಂವಿಧಾನಿಕ ಸಂಸ್ಥೆಯಾಗಿದ್ದು, ಕರ್ನಾಟಕ ನಾಗರೀಕ ಸೇವೆಯ ವಿವಿಧ ವೃಂದದ ಹುದ್ದೆಗಳ ಆಯ್ಕೆ ಪ್ರಾಧಿಕಾರವಾಗಿದ್ದು, ಸರ್ಕಾರವು ಕಾಲಕಾಲಕ್ಕೆ ರೂಪಿಸುವ ನಿಯಮಗಳು ಮತ್ತು ಆದೇಶಗಳನ್ವಯ ಹಾಗೂ ಚಾಲ್ತಿಯಲ್ಲಿರುವ ನೇಮಕಾತಿ ನಿಯಮಗಳಂತೆ ನೇಮಕಾತಿ ಪ್ರಾಧಿಕಾರಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಯನ್ನು ಪರಿಶೀಲಿಸಿ ಎಲ್ಲಾ ವೃಂದದ ಅಂದರೆ ಗ್ರೂಪ್ ಎ, ಬಿ, ಸಿ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳುತ್ತಿದೆ.

ಕರ್ನಾಟಕ ಲೋಕಸೇವಾ ಆಯೋಗವು ಕಳೆದ ಒಂದು ವರ್ಷದಲ್ಲಿ 12 ಅಧಿಸೂಚನೆಗಳನ್ನು ಹೊರಡಿಸಿ, ಒಟ್ಟು 1734 ಹುದ್ದೆಗಳ 37 ಪತ್ರಿಕೆಗಳಿಗೆ ಒಟ್ಟಾರೆ 11,40,292 ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯಾವುದೇ ಲೋಪ ದೋಷಗಳಿಲ್ಲದೆ ಸುಲಲಿತವಾಗಿ ನಡೆಸಿರುತ್ತದೆ.

ಸದರಿ ಪರೀಕ್ಷೆಗಳ ಪೈಕಿ ದಿನಾಂಕ:27-08-2024ರಂದು ನಡೆದ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಪರೀಕ್ಷೆ, ಹಾಗೂ ದಿನಾಂಕ:29-12-2024ರಂದು ನಡೆದ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಮರು ಪರೀಕ್ಷೆಗಳಿಗೆ ಸಂಬಂಧಿಸಿದಂತೆ **ಕನ್ನಡ ಪ್ರಶ್ನೆ ಪತ್ರಿಕೆಯಲ್ಲಿ ಉಂಟಾಗಿರುವ ಭಾಷಾಂತರ ಲೋಪದೋಷಗಳ ಬಗ್ಗೆ ಪರೀಕ್ಷಾರ್ಥಿಗಳಿಗೆ ಗೊಂದಲ ಉಂಟಾಗಿರುವುದಾಗಿ ಅಭ್ಯರ್ಥಿಗಳು ಹಾಗೂ ಸಂಘ/ ಸಂಸ್ಥೆಗಳು ಮನವಿ ಸಲ್ಲಿಸಿರುತ್ತಾರೆ.**

ಈ ಸಂಬಂಧ, ಉತ್ತಮ ಕನ್ನಡ ಭಾಷಾ ಜ್ಞಾನವನ್ನು ಹೊಂದಿರುವ ಹಾಗೂ ಆಯಾ ವಿಷಯಗಳಲ್ಲಿ ಪರಿಣತಿ ಹೊಂದಿರುವಂತಹ ವಿಷಯ ತಜ್ಞರುಗಳ ಸಮಿತಿಗಳನ್ನು ರಚಿಸಿ ಅಭಿಪ್ರಾಯವನ್ನು ಪಡೆಯಲಾಗಿದ್ದು, ಭಾಷಾಂತರ ಮತ್ತು ತಾಂತ್ರಿಕ ದೋಷದಿಂದಾಗಿ ಕೆಲವು ಪ್ರಶ್ನೆಗಳಿಗೆ ಕೃಪಾಂಕ ಹಾಗೂ ಕೆಲವು ಪ್ರಶ್ನೆಗಳ ಕೀ-ಉತ್ತರವನ್ನು ಪರಿಷ್ಕರಿಸಬೇಕೆಂದು, ಕೆಲವು ಪ್ರಶ್ನೆಗಳಲ್ಲಿ ವ್ಯತ್ಯಾಸವಿದ್ದರೂ ಸಹ ಪ್ರಶ್ನೆಯನ್ನು ಅರ್ಥೈಸಿಕೊಳ್ಳಬಹುದೆಂದು ಹಾಗೂ ಇನ್ನುಳಿದ ಪ್ರಶ್ನೆಗಳಲ್ಲಿ ಯಾವುದೇ ಭಾಷಾಂತರ ವ್ಯತ್ಯಾಸವಿರುವುದಿಲ್ಲವೆಂದು ಅಭಿಪ್ರಾಯ ನೀಡಿರುತ್ತಾರೆ.

ಕರ್ನಾಟಕ ಲೋಕಸೇವಾ ಆಯೋಗವು ಜಿಲ್ಲಾ/ ತಾಲ್ಲೂಕು ಕೇಂದ್ರಗಳಲ್ಲಿ ಪರೀಕ್ಷೆಗಳನ್ನು ನಡೆಸುತ್ತಿದ್ದು, ಸದರಿ ಪರೀಕ್ಷೆಗಳ ಗೋಪ್ಯ ಸಾಮಗ್ರಿಗಳನ್ನು ಆಯಾ ಜಿಲ್ಲೆಯ ಅಪರ ಜಿಲ್ಲಾಧಿಕಾರಿ, ಜಿಲ್ಲಾ ಖಜಾನಾಧಿಕಾರಿ ಮತ್ತು ಡಿ. ಡಿ. ಪಿ. ಐ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಆಯಾ ತಾಲ್ಲೂಕುಗಳ ತಹಶಿಲ್ದಾರ್, ತಾಲ್ಲೂಕು ಖಜಾನಾಧಿಕಾರಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನೊಳಗೊಂಡ ತ್ರಿ ಸದಸ್ಯ ಸಮಿತಿಯ ನೇತೃತ್ವದಲ್ಲಿ ಸ್ವೀಕರಿಸಿ ಖಜಾನೆಗಳಲ್ಲಿ ಭದ್ರ ಪಡಿಸಲು ಹಾಗೂ ಇವರುಗಳ ನೇತೃತ್ವದಲ್ಲಿಯೇ ಪರೀಕ್ಷೆಗಳನ್ನು ಸುಲಲಿತವಾಗಿ ನಡೆಸಲು ಕ್ರಮಹಿಸಲಾಗಿರುತ್ತದೆ.

ಪರೀಕ್ಷಾ ಸಂದರ್ಭದಲ್ಲಿ ಗೋಪ್ಯತೆಯನ್ನು ಕಾಪಾಡಲು ಈ ಕೆಳಕಂಡಂತೆ ಕ್ರಮವಹಿಸಲಾಗಿರುತ್ತದೆ.

- ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ನೀಡಲಾಗುವ ಒ.ಎಂ.ಆರ್ ಉತ್ತರ ಹಾಳೆಯ ಮಧ್ಯ ಭಾಗದಲ್ಲಿ Perforation ಅನ್ನು ನೀಡಲಾಗಿದೆ. ಒ.ಎಂ.ಆರ್ ಉತ್ತರ ಹಾಳೆಯ ಎಡಭಾಗದಲ್ಲಿ ಅಭ್ಯರ್ಥಿಯ ಸಹಿ, ನೊಂದಣಿ ಸಂಖ್ಯೆ, ವಿಷಯ ಸಂಕೇತ ಹಾಗೂ ಸಂವೀಕ್ಷಕರ ಸಹಿ ಹಾಗೂ ಬಲಭಾಗದಲ್ಲಿ (Response ಭಾಗ) ಪ್ರಶ್ನೆ ಪತ್ರಿಕೆಯ ಶ್ರೇಣಿ ಮತ್ತು ಅಭ್ಯರ್ಥಿಗಳ ಉತ್ತರಗಳನ್ನು ಎನ್‌ಕೋಡ್ ಮಾಡಲು ಅವಕಾಶ ನೀಡಲಾಗಿರುತ್ತದೆ.

- ಪ್ರತಿ ಪರೀಕ್ಷಾ ಕೇಂದ್ರಗಳಿಗೆ ಕೊಠಡಿವಾರು ಟ್ಯಾಂಪರ್ ಎವಿಡೆಂಟ್ ಕವರ್‌ಗಳನ್ನು ನೀಡಲಾಗುತ್ತಿದ್ದು, ಪರೀಕ್ಷೆ ಮುಕ್ತಾಯದ ನಂತರ ಸಂವೀಕ್ಷಕರು ನಾಲ್ಕು ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಸಹಿ ಪಡೆದು ಒ.ಎಂ.ಆರ್ ಉತ್ತರ ಹಾಳೆಗಳನ್ನು ಟ್ಯಾಂಪರ್ ಎವಿಡೆಂಟ್ ಕವರ್‌ಗಳಲ್ಲಿರಿಸಿ ಸೀಲ್ ಮಾಡಿ ಪರೀಕ್ಷಾ ಕೇಂದ್ರದ ಮೇಲ್ವಿಚಾರಕರುಗಳ ಸುಪರ್ದಿಗೆ ನೀಡುವಂತೆ ಕ್ರಮವಹಿಸಲಾಗಿರುತ್ತದೆ.

- ಪರೀಕ್ಷಾ ಕೇಂದ್ರದ ಮೇಲ್ವಿಚಾರಕರು ಪರೀಕ್ಷೆ ಮುಗಿದ ನಂತರ ಎಲ್ಲಾ ಕೊಠಡಿಗಳ ಸಂವೀಕ್ಷಕರುಗಳಿಂದ ಹಾಜರಾದ ಅಭ್ಯರ್ಥಿಗಳ ಒ.ಎಂ.ಆರ್ ಉತ್ತರ ಹಾಳೆಗಳನ್ನು ಸ್ವೀಕರಿಸಿ ಹಾಜರಾತಿ ಸಂಖ್ಯೆಯನ್ನು ನಮೂದಿಸಿ Perforation ಉಳ್ಳ ಭಾಗವನ್ನು ಪ್ರತ್ಯೇಕಿಸಿ/ ಬೇರ್ಪಡಿಸಿ ಪ್ರತ್ಯೇಕ ಟ್ಯಾಂಪರ್ ಎವಿಡೆಂಟ್ ಕವರ್‌ಗಳಲ್ಲಿರಿಸಿ ಸೀಲ್ ಮಾಡಿ ಬಂಡಲ್‌ನಲ್ಲಿರಿಸಿ ಆಯೋಗಕ್ಕೆ ರವಾನಿಸಲು ಕ್ರಮವಹಿಸಲಾಗಿರುತ್ತದೆ.

- ಒ.ಎಂ.ಆರ್ ಉತ್ತರ ಹಾಳೆಯ ಬಲಭಾಗದ (Response ಭಾಗ) ಸ್ಕ್ಯಾನಿಂಗ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಕೀ ಉತ್ತರಗಳನ್ನು ಪ್ರಕಟಿಸಲು ಕ್ರಮವಹಿಸಲಾಗಿರುತ್ತದೆ.

ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ನೇಮಕಾತಿ ಪ್ರಕ್ರಿಯೆಗಳಲ್ಲಿ ಪಾರದರ್ಶಕತೆಯನ್ನು ತರಲು ಮತ್ತು ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟುವ ಸಲುವಾಗಿ ಹಲವಾರು ಸುರಕ್ಷಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

- ಆಯೋಗದಲ್ಲಿ ಕರ್ನಾಟಕ ರಾಜ್ಯ ಸೇವೆಗಳಲ್ಲಿನ ಹುದ್ದೆಗಳಿಗೆ ಮತ್ತು ಸೇವೆಗಳಿಗೆ ಆಯ್ಕೆ ಮಾಡುವಲ್ಲಿ ಮುಕ್ತ, ನಿಷ್ಪಕ್ಷಪಾತವಾದ ಮತ್ತು ಅರ್ಹತೆ ಆಧಾರಿತ ಆಯ್ಕೆಗಳನ್ನು ಮಾಡಲು ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಜಾರಿಯಲ್ಲಿರುವ ವ್ಯವಸ್ಥೆ ಮತ್ತು ಪ್ರಕ್ರಿಯೆಗಳನ್ನು ಪರಿಷ್ಕರಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರವು ರಚಿಸಿದ್ದ ಶ್ರೀ ಪಿ.ಸಿ. ಹೋಟಾ ಸಮಿತಿಯು ನೀಡಿರುವ ವರದಿಯ ಆಧಾರದ ಮೇಲೆ ನೇಮಕಾತಿಗಳಲ್ಲಿ ಪಾರದರ್ಶಕತೆಯನ್ನು ತರಲು ಗೋಪ್ಯ ಕಾರ್ಯಗಳನ್ನು ನಿರ್ವಹಿಸಲು ಒಂದು ಪರೀಕ್ಷಾ ನಿಯಂತ್ರಕರ ಹುದ್ದೆಯನ್ನು ಸೃಜಿಸಲಾಗಿರುತ್ತದೆ ಮತ್ತು ಸದರಿ ಹುದ್ದೆಯನ್ನು ಭಾರತೀಯ ಆಡಳಿತ ಸೇವೆಯ ಅಧಿಕಾರಿಯವರಿಂದ ಭರ್ತಿ ಮಾಡಲಾಗುತ್ತಿದ್ದು, ಅವರು ಸ್ಪರ್ಧಾತ್ಮಕ ಪರೀಕ್ಷೆಗಳ ಹಾಗೂ ವ್ಯಕ್ತಿತ್ವ ಪರೀಕ್ಷೆಗಳ ಎಲ್ಲಾ ಗೌಪ್ಯ ವಿಷಯಗಳ ಮಾಹಿತಿಯು ಏಕಮಾತ್ರವಾಗಿ ಇವರ ಸುಪರ್ದಿನಲ್ಲಿರಬೇಕು ಇವರು ಈ ವಿಷಯಗಳನ್ನು /ಮಾಹಿತಿಯನ್ನು ಕ.ಲೋ.ಸೇ. ಆಯೋಗದ ಕಾರ್ಯದರ್ಶಿ ಹಾಗೂ ಅಧ್ಯಕ್ಷರೊಡನೆಯೂ ಇಂತಹ ಮಾಹಿತಿಯನ್ನು ತಿಳಿದುಕೊಳ್ಳುವ ಅವಶ್ಯಕತೆಯ (Need-to-know) ತತ್ವದ ಆಧಾರದ ಹೊರತಾಗಿ ಹಂಚಿಕೊಳ್ಳುವಂತಿಲ್ಲ ಎಂದು ಶಿಫಾರಸ್ಸು ಮಾಡಿರುವಂತೆ ಪರೀಕ್ಷಾ ನಿಯಂತ್ರಕರು ಕಾರ್ಯನಿರ್ವಹಿಸುತ್ತಿರುತ್ತಾರೆ.

- ಇದಲ್ಲದೆ, ಆಯೋಗದಲ್ಲಿದ್ದ ಜಂಟಿ ಕಾರ್ಯದರ್ಶಿ ಹುದ್ದೆಯನ್ನು ಜಂಟಿ ಪರೀಕ್ಷಾ ನಿಯಂತ್ರಕರ ಹುದ್ದೆಯೆಂದು ಪದನಾಮೀಕರಿಸಲಾಗಿರುತ್ತದೆ ಹಾಗೂ ಅಖಿಲ ಭಾರತ ಸೇವೆಯ ವೃಂದದ ಅಧಿಕಾರಿಯಿಂದ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಸದರಿ ಅಧಿಕಾರಿಗೆ ಗ್ರೂಪ್ 'ಸಿ' ವೃಂದದ ಪರೀಕ್ಷೋತ್ತರ ಕಾರ್ಯಗಳಲ್ಲದೆ ಇಲಾಖಾ ಪರೀಕ್ಷೆಗಳ ಪೂರ್ಣ ಗೌಪ್ಯ ಕಾರ್ಯಗಳನ್ನು ವಹಿಸಲಾಗಿರುತ್ತದೆ.

- ಆಯೋಗದ ಪರೀಕ್ಷೆಗಳನ್ನು ನಡೆಸುವಂತಹ ಪರೀಕ್ಷಾ ಉಪಕೇಂದ್ರಗಳಲ್ಲಿ ಅಕ್ರಮಗಳನ್ನು ತಡೆಗಟ್ಟಲು ಮತ್ತು ದುರಾಚಾರ ಪ್ರಕರಣಗಳನ್ನು ನಿಯಂತ್ರಿಸಲು ಪ್ರತಿ ಪರೀಕ್ಷಾ ಕೊಠಡಿಗಳಿಗೆ ಮತ್ತು ನಿಯಂತ್ರಣ ಕೊಠಡಿಗೆ ಸಿ.ಸಿ.ಕ್ಯಾಮೆರಾಗಳನ್ನು ಅಳವಡಿಸಲಾಗುತ್ತಿದ್ದು ಮತ್ತು ನೇರ ದೃಶ್ಯಾವಳಿಗಳನ್ನು ಆಯೋಗದ ಕೇಂದ್ರ ಕಛೇರಿಯಲ್ಲಿ ಸ್ಥಾಪಿಸಲಾಗಿರುವ ಕಮಾಂಡ್ ಸೆಂಟರ್‌ನಲ್ಲಿ ವೀಕ್ಷಿಸಲು ಸಾಧ್ಯವಾಗುವಂತೆ ವ್ಯವಸ್ಥೆ ಮಾಡಲಾಗಿದೆ ಮತ್ತು ಪರೀಕ್ಷೆ ಮುಗಿದ ನಂತರ ಪರೀಕ್ಷಾ ಕೇಂದ್ರದಲ್ಲಿನ ಸಿ.ಸಿ.ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಸಹ ಡೌನ್‌ಲೋಡ್ ಮಾಡಿಕೊಂಡು ಸಂರಕ್ಷಿಸಲಾಗುತ್ತಿದೆ ಹಾಗೂ ಅಗತ್ಯವಾದ ಸಂದರ್ಭದಲ್ಲಿ ಸದರಿ ಸಿ.ಸಿ.ಕ್ಯಾಮರಾಗಳ ಫೂಟೇಜ್‌ಗಳನ್ನು ಪರಿಶೀಲಿಸಲಾಗುತ್ತದೆ.

- ಇದಲ್ಲದೆ, ಪರೀಕ್ಷೆ ನಡೆಯುವ ಮುನ್ನ ಪ್ರಶ್ನೆ ಪತ್ರಿಕೆ ಪರೀಕ್ಷಾ ಕೇಂದ್ರದಲ್ಲಿ ಸ್ವೀಕೃತವಾದ ಸಮಯದಿಂದ ಹಿಡಿದು ಪರೀಕ್ಷೆಗಳನ್ನು ಮುಗಿಸಿ ಪರೀಕ್ಷಾ ಸಾಮಾಗ್ರಿಗಳನ್ನು ಆಯೋಗಕ್ಕೆ ರವಾನಿಸುವರೆಗಿನ ಸಂಪೂರ್ಣ ಪ್ರಕ್ರಿಯೆಗಳನ್ನು

Time Stamp ವಿಡಿಯೋಗ್ರಫಿ ಮಾಡಿಸಲಾಗುತ್ತಿದೆ. ಇದಲ್ಲದೆ ಅಭ್ಯರ್ಥಿಗಳು ಪರೀಕ್ಷಾ ಬರೆಯುವ ಸಂದರ್ಭದಲ್ಲಿಯೂ ಎಲ್ಲಾ ಕೊಠಡಿಗಳಲ್ಲಿಯೂ ವಿಡಿಯೋಗ್ರಾಫರ್ ಮುಖಾಂತರ ವಿಡಿಯೋ ಚಿತ್ರೀಕರಣ ಮಾಡಿಸಲಾಗುತ್ತಿದೆ.

- ಆಯೋಗದ ಪರೀಕ್ಷೆಗಳಿಗೆ ಅಭ್ಯರ್ಥಿಗಳು ಮೊಬೈಲ್, ಬ್ಲೂಟೂತ್ ಮತ್ತು ಇನ್ನಿತರೆ ಆಧುನಿಕ ಸಂವಹನ ಉಪಕರಣಗಳನ್ನು ಬಳಸಿ ದುರಾಚಾರ ಪ್ರಕರಣಗಳನ್ನು ಎಸಗುವುದನ್ನು ತಡೆಗಟ್ಟುವ ಸಲುವಾಗಿ ಭಾರತ ಸರ್ಕಾರದ ECIL/BEL ಸಂಸ್ಥೆಯಿಂದ ಪರೀಕ್ಷಾ ಉಪಕೇಂದ್ರಗಳಲ್ಲಿ ರೂಂ-ಜಾಮರ್‌ಗಳನ್ನು ಅಳವಡಿಸಲಾಗುತ್ತಿದೆ.

- ಆಯೋಗದ ಪರೀಕ್ಷೆಗಳಿಗೆ ಅಭ್ಯರ್ಥಿಗಳು ಮೊಬೈಲ್, ಬ್ಲೂಟೂತ್ ಮತ್ತು ಇನ್ನಿತರೆ ಆಧುನಿಕ ಸಂವಹನ ಉಪಕರಣಗಳನ್ನು ಕೊಂಡೊಯ್ಯುವುದನ್ನು ತಡೆಗಟ್ಟಲು HHMD (Hand Held Metal Detector) ಯಂತ್ರದ ಸಹಾಯದಿಂದ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಗೆ ತೆರಳುವ ಮುನ್ನ ಪ್ರತಿ ಅಭ್ಯರ್ಥಿಯ ಸಂಪೂರ್ಣ ತಪಾಸಣೆ ಮಾಡಿಸಲಾಗುತ್ತಿದೆ.

- ಆಯೋಗದ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳ impersonation ತಪ್ಪಿಸುವ ಸಲುವಾಗಿ Face Recognization/ Bio-metric ಹಾಜರಾತಿ ತೆಗೆದುಕೊಳ್ಳುವ ಪದ್ಧತಿಯನ್ನು ಜಾರಿ ಮಾಡಲಾಗಿರುತ್ತದೆ.

- ಪರೀಕ್ಷೆಗೆ ಪ್ರತಿ ಅಭ್ಯರ್ಥಿಗಳಿಗೆ ವ್ಯಕ್ತಿಗತ (Personalised O.M.R) ಓ.ಎಂ.ಆರ್ ಹಾಳೆಗಳನ್ನು ಒದಗಿಸಲಾಗುತ್ತದೆ ಹಾಗೂ ಓ.ಎಂ.ಆರ್ ಹಾಳೆಗಳನ್ನು ಎರಡು ಭಾಗಗಳನ್ನಾಗಿ ವಿಂಗಡಿಸಲಾಗಿದ್ದು, ಒಂದು ಭಾಗದಲ್ಲಿ ಅಭ್ಯರ್ಥಿಗಳ ವಿವರಗಳನ್ನು ಮತ್ತು ಇನ್ನೊಂದು ಭಾಗದಲ್ಲಿ ಉತ್ತರಗಳ ಆಯ್ಕೆಗಳನ್ನು ಒಳಗೊಂಡಿರುತ್ತದೆ. ಸದರಿ ಭಾಗಗಳನ್ನು ಪರೀಕ್ಷಾ ಉಪಕೇಂದ್ರಗಳಲ್ಲಿಯೇ Perforation ಮಾಡಿ ಪ್ರತ್ಯೇಕಿಸಿ ಪ್ರತ್ಯೇಕ Tamper Evident Cover ನಲ್ಲಿರಿಸಿ ಸೀಲ್ ಮಾಡಿ ಆಯೋಗಕ್ಕೆ ರವಾನಿಸಲು ಸೂಚಿಸಲಾಗಿರುತ್ತದೆ. ಅದರಂತೆ ಪರೀಕ್ಷಾ ಉಪಕೇಂದ್ರಗಳಿಂದ ಸೀಲ್ ಮಾಡಿರುವ ಬಂಡಲ್‌ಗಳನ್ನು ಆಯೋಗದಲ್ಲಿ ಸ್ವೀಕರಿಸಲಾಗುತ್ತಿದೆ.

- ಪರೀಕ್ಷಾ ಕೇಂದ್ರಗಳಿಗೆ ಅಭ್ಯರ್ಥಿಗಳನ್ನು ಹಂಚಿಕೆ ಮಾಡುವ ಸಂದರ್ಭದಲ್ಲಿ (Randomization) ಪದ್ಧತಿಯನ್ನು ಅಳವಡಿಸಿಕೊಳ್ಳಲಾಗುತ್ತಿದೆ.

- ಆಯೋಗದ ವೆಬ್‌ಸೈಟ್‌ನ ಮುಖಪುಟದಲ್ಲಿ ಎಚ್ಚರಿಕೆ ಎಂಬ ಶೀರ್ಷಿಕೆಯಡಿ ಈ ಕೆಳಕಂಡ ಮಾಹಿತಿಯನ್ನು ನಿರಂತರವಾಗಿ ಬಿತ್ತರಿಸಲಾಗುತ್ತಿದೆ.

"ಎಚ್ಚರಿಕೆ...! ಆಯೋಗದ ವಿವಿಧ ನೇಮಕಾತಿಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಎಚ್ಚರಿಸುವುದೇನೆಂದರೆ, ಅವರುಗಳು ಯಾವುದೇ ಮಧ್ಯವರ್ತಿಗಳು, ಏಜೆಂಟ್‌ಗಳು, ಆಯೋಗದ ಅಧಿಕಾರಿ/ ಸಿಬ್ಬಂದಿಗಳು ಅಥವಾ ಅನ್ಯವ್ಯಕ್ತಿಗಳ ಮುಖಾಂತರ ವಾಮಮಾರ್ಗದಲ್ಲಿ ಹಣಕಾಸು ನೀಡುವ ಮೂಲಕ ಆಯ್ಕೆ ಹೊಂದಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಗಳು, ಆಯೋಗದ ಅಧಿಕಾರಿ/ಸಿಬ್ಬಂದಿಗಳು ಹಾಗೂ ಅನ್ಯವ್ಯಕ್ತಿಗಳ ವಿರುದ್ಧ ಕಠಿಣವಾದ ಕಾನೂನು ಕ್ರಮ ಕೈಗೊಳ್ಳಲಾಗುವುದು" ಎಂದು ಅಭ್ಯರ್ಥಿಗಳಿಗೆ ಎಚ್ಚರಿಸಲಾಗಿದೆ.

- ಆಯೋಗದ ಕಛೇರಿಗೆ ಅನಧಿಕೃತ ವ್ಯಕ್ತಿಗಳ ಪ್ರವೇಶವನ್ನು ಮತ್ತು ಅಭ್ಯರ್ಥಿಗಳು ಆಯೋಗದ ಅಧಿಕಾರಿ/ಸಿಬ್ಬಂದಿಗಳನ್ನು ಭೇಟಿ ಮಾಡುವುದು ಮತ್ತು ವಿನಾ ಕಾರಣ ಆಯೋಗದ ಕಛೇರಿಗೆ ಆಗಮಿಸುವುದನ್ನು ತಡೆಗಟ್ಟುವ ಸಲುವಾಗಿ ಆಯೋಗದ ಕಛೇರಿಗೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಆಯೋಗದ ನೇಮಕಾತಿಗಳಲ್ಲಿ ಪಾರದರ್ಶಕತೆಯನ್ನು ತರಲು ವಿವಿಧ ಸುಧಾರಣೆಗಳನ್ನು ಮಾಡಲಾಗಿದೆ ಹಾಗೂ ಶ್ರೀ ಪಿ.ಸಿ. ಹೋಟಾ ಸಮಿತಿಯ ಶಿಫಾರಸ್ಸುಗಳನುಸಾರ ಮತ್ತು ನೇಮಕಾತಿ ನಿಯಮಗಳು ಹಾಗೂ ಆದೇಶಗಳನ್ವಯ ನೇಮಕಾತಿಯ ಪ್ರಕ್ರಿಯೆಯನ್ನು ಪ್ರಾಮಾಣಿಕ ರೀತಿಯಲ್ಲಿ ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲು ಆಯೋಗದ ವತಿಯಿಂದ ಕ್ರಮಕೈಗೊಳ್ಳಲಾಗುತ್ತಿದೆ.

ಸಿಆಸುಇ 40 ಎಸ್‌ಎಸ್‌ಸಿ 2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ